**All India Radio: Bangalore**
**Regional Bulletin In Kannada**
**26.08.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ಆಭರಣ ಪಾರ್ಕ್ ಸ್ಥಾಪನೆಗೆ ಸರ್ಕಾರ ನಿರ್ಧಾರ
2. ಸಚಿವರು, ಶಾಸಕರು, ಪಕ್ಷದ ಶಿಸ್ತಿನ ಸಿಪಾಯಿಗಳು - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಮತ
3. ವಿಶ್ವವಿಖ್ಯಾತ ಮೈಸೂರು ದಸರಾ ಮೊದಲ ಹಂತದ ಗಜಪಯಣಕ್ಕೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಚಾಲನೆ
4. ಮಂಗಳೂರು ವ್ಯಾಪ್ತಿಯ ರೈಲು ಜಾಲವನ್ನು ನೈಋತ್ಯ ರೈಲ್ವೆ ವಲಯಕ್ಕೆ ಸೇರ್ಪಡೆಗೊಳಿಸಲು ಆಡಳಿತಾತ್ಮಕ ಸಹಕಾರ ನೀಡುವಂತೆ ಮುಖ್ಯಮಂತ್ರಿಗೆ ಸಂಸದ ಬ್ರಿಜೇಶ್ ಚೌಟ ಮನವಿ
5. ರಾಜ್ಯದೆಲ್ಲೆಡೆ ಇಂದು ಈದ್ ಮಿಲಾದ್ ಸಂಭ್ರಮ ; ಮುಸ್ಲಿಂ ಬಾಂಧವರಿಂದ ವಿಶೇಷ ಪ್ರಾರ್ಥನೆ

<><><><>

ಕರ್ನಾಟಕ ಜ್ಯುವೆಲ್ಲರಿ ಅಸೋಸಿಯೇಷನ್ ಸಂಘದ ಅಧ್ಯಕ್ಷ ಟಿ.ಎ.ಶರವಣ ನೇತೃತ್ವದಲ್ಲಿ ಸಂಘದ ಸದಸ್ಯರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ, ಜ್ಯುವೆಲ್ಲರಿ ಪಾರ್ಕ್ ಸ್ಥಾಪಿಸಲು ಜಮೀನು ಮಂಜೂರು ಮಾಡುವಂತೆ ಮನವಿ ಸಲ್ಲಿಸಿದರು. ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು, ದಕ್ಷಿಣ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ಜ್ಯುವೆಲ್ಲರಿ ಪಾರ್ಕ್ ಸ್ಥಾಪಿಸುವುದಾಗಿ ಭರವಸೆ ನೀಡಿದರು.

<><><><>

ವಿರೋಧ ಪಕ್ಷಗಳ ಒತ್ತಡದ ಹಿನ್ನೆಲೆಯಲ್ಲಿ ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಬಿ.ನಾಗೇಂದ್ರ ರಾಜೀನಾಮೆ ನೀಡುವ ಸಾಧ್ಯತೆಯಿದೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಪಕ್ಷದ ಹಿತದೃಷ್ಟಿಯಿಂದ ರಾಜೀನಾಮೆ ನೀಡಲು ಸಿದ್ಧವಿರುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಚಿವ ನಾಗೇಂದ್ರ ತಿಳಿಸಿದ್ದಾರೆ ಎಂದು ವರದಿಯಾಗಿದೆ. ಈ ಕುರಿತಂತೆ ಬೆಂಗಳೂರಿನಲ್ಲಿಂದು ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರು, ಶಾಸಕರು, ಕಾರ್ಯಕರ್ತರು ಪಕ್ಷದ ಸಿಪಾಯಿಗಳು ಎಂದು ತಿಳಿಸಿದ್ದಾರೆ. ನಾಗೇಂದ್ರ ರಾಜೀನಾಮೆ ವಿಚಾರವನ್ನು ತಳ್ಳಿ ಹಾಕದ ಮುಖ್ಯಮಂತ್ರಿ ಈ ಕುರಿತಂತೆ ಪ್ರತಿಕ್ರಿಯಿಸಲು ನಿರಾಕರಿಸಿ ಸ್ಥಳದಿಂದ ನಿರ್ಗಮಿಸಿದ್ದಾರೆ. ಪ್ರತಿಪಕ್ಷಗಳು ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ, ಸದನದಲ್ಲಿಯೂ ಪ್ರತಿಭಟನೆ ನಡೆಸಿದ್ದರಿಂದ ವಿಧಾನಮಂಡಲ ಅಧಿವೇಶನವನ್ನು ಅರ್ಧಕ್ಕೆ ಮೊಟಕುಗೊಳಿಸಲಾಗಿತ್ತು. ಇದೀಗ ಪ್ರತಿಪಕ್ಷ ಜೆಡಿಎಸ್ ಹಾಗೂ ಬಿಜೆಪಿ ಪಾದಯಾತ್ರೆ ನಡೆಸಲು ನಿರ್ಧರಿಸಿರುವುದು ಸರ್ಕಾರಕ್ಕೆ ಮುಜುಗರ ಉಂಟುಮಾಡಿದೆ.

<><><><>

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವ ೨೦೨೬ರ ಗಜಪಯಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಇಂದು ಹುಣಸೂರು ಸಮೀಪದ ವೀರನಹೊಸಹಳ್ಳಿಯಲ್ಲಿ ಸಂಪ್ರದಾಯಿಕವಾಗಿ ಚಾಲನೆ ನೀಡಿದರು. ನಾಡಹಬ್ಬ ದಸರಾದಲ್ಲಿ ಪಾಲ್ಗೊಳ್ಳುವ ಗಜಪಡೆಗೆ ಅರಣ್ಯದಿಂದ ನಾಡಿಗೆ ಆಹ್ವಾನಿಸುವ ಪರಂಪರೆಯಂತೆ ಧಾರ್ಮಿಕ ಪೂಜೆ ಸಲ್ಲಿಸಿ ಬೀಳ್ಕೊಡಲಾಯಿತು. ಮೊದಲ ಹಂತದಲ್ಲಿ ಮಹೇಂದ್ರ, ಶ್ರೀಕಂಠ, ಲಕ್ಷ್ಮಿ, ಏಕಲವ್ಯ, ಧನಂಜಯ, ಗೋಪಿ, ಕಾವೇರಿ, ಪ್ರಶಾಂತ ಹಾಗೂ ಶ್ರೀರಾಮ ಸೇರಿ ಒಟ್ಟು ೯ ಆನೆಗಳು ಮೈಸೂರಿನತ್ತ ಪಯಣ ಬೆಳೆಸಿದವು. ಇದೇ ವೇಳೆ, ಕಳೆದ ಕೆಲವು ವರ್ಷಗಳಿಂದ ಯಶಸ್ವಿಯಾಗಿ ಅಂಬಾರಿ ಹೊತ್ತು ಪ್ರಸ್ತುತ ನಿವೃತ್ತಿಯಾಗಿರುವ 'ಅಭಿಮನ್ಯು' ಆನೆಗೆ ಗೌರವಪೂರ್ವಕ ಬೀಳ್ಕೊಡುಗೆ ನೀಡಲಾಯಿತು. ಈ ಸಂದರ್ಭದಲ್ಲಿ ಶಾಸಕರಾದ ಅನಿಲ್ ಚಿಕ್ಕಮಾದು, ಜಿ.ಡಿ.ಹರೀಶ್ ಗೌಡ, ಡಿ.ರವಿಶಂಕರ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಪ್ರಾದೇಶಿಕ ಆಯುಕ್ತ ನಿತೀಶ್ ಪಾಟೀಲ್, ದಕ್ಷಿಣ ವಲಯದ ಐಜಿಪಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಎಸ್.ಯುಕೇಶ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ಹಾಸನ ತಾಲ್ಲೂಕಿನ, ಹಂದಿನಕೆರೆ ಏತ ನೀರಾವರಿ ಯೋಜನೆಗೆ ಪರಿಹಾರ ನೀಡದೆ ಭೂಮಿ ನೀಡುವುದಿಲ್ಲ ಎಂದು ರೈತರು ಪಟ್ಟು ಹಿಡಿದ ಹಿನ್ನೆಲೆಯಲ್ಲಿ ಯೋಜನಾ ಸ್ಥಳಕ್ಕೆ ಅಬಕಾರಿ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಂದಿನಕೆರೆ ಏತ ನೀರಾವರಿ ಯೋಜನೆಯಿಂದ ಹಾಸನದ ಸತ್ಯಮಂಗಲ ಹಾಗೂ ಚನ್ನಪಟ್ಟಣ ಕೆರೆ ತುಂಬಿಸುವ ಯೋಜನೆ ಕಾಮಗಾರಿ ವಿಳಂಬವಾಗಿತ್ತು. ರೈತರು ಪರಿಹಾರಕ್ಕೆ ಪಟ್ಟು ಹಿಡಿದ ಕಾರಣ ಕಳೆದ ಐದು ವರ್ಷದಿಂದ ಕಾಮಗಾರಿ ಪೂರ್ಣಗೊಳ್ಳದೆ ಬಾಕಿ ಉಳಿದಿತ್ತು. ಈ ಹಿನ್ನೆಲೆಯಲ್ಲಿ ಇಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೇರಿದಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳ ಜೊತೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಾಮಗಾರಿಗಾಗಿ ೩೨ ಗುಂಟೆ ಜಮೀನು ನೀಡಬೇಕಿದ್ದ ಐವರು ರೈತರನ್ನು ಕರೆದು ಸ್ಥಳದಲ್ಲೇ ಪರಿಹಾರ ಚೆಕ್ ವಿತರಿಸಿದ ಸಚಿವರು ಎರಡು ದಿನದಲ್ಲಿ ಕರೆಗಳಿಗೆ ನೀರು ಹರಿಸಬೇಕು ಎಂದು ಸೂಚನೆ ನೀಡಿದರು. ಈ ವೇಳೆ ಮಾತನಾಡಿದ ಸಚಿವ ಕೆ.ಎಂ.ಶಿವೆಂಗೇಗೌಡ, ಹಂದಿನ ಕೆರೆ ಏತ ನೀರಾವರಿ ಯೋಜನೆಯ ಮೂಲಕ ಕೆರೆಗಳಿಗೆ ನೀರು ಹರಿಸುವ ಸದುದ್ದೇಶಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

<><><>

ಮಂಗಳೂರು ವ್ಯಾಪ್ತಿಯ ರೈಲು ಜಾಲವನ್ನು ನೈಋತ್ಯ ರೈಲ್ವೆ ವಲಯಕ್ಕೆ ಸೇರ್ಪಡೆಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಐತಿಹಾಸಿಕ ನಿರ್ಧಾರ ಕೈಗೊಂಡಿದೆ. ಈ ಬಗ್ಗೆ ರೈಲ್ವೆ ಮಂಡಳಿ ಹೊರಡಿಸಿರುವ ಅಧಿಸೂಚನೆಯನ್ನು ಕಾರ್ಯರೂಪಕ್ಕೆ ತರುವುದಕ್ಕೆ ರಾಜ್ಯ ಸರ್ಕಾರವು ಪೂರ್ಣ ರೀತಿಯ ಆಡಳಿತಾತ್ಮಕ ಸಹಕಾರ ನೀಡಬೇಕು ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ. ಮಂಗಳೂರು ರೈಲು ಜಾಲವನ್ನು ಕೇರಳಂನ ಪಾಲ್ಘಾಟ್ ವಿಭಾಗದಿಂದ ಬೇರ್ಪಡಿಸಿ ಮೈಸೂರು ವಿಭಾಗಕ್ಕೆ ಸೇರಿಸಲಾಗಿದೆ. ಈ ಮೂಲಕ ಕರಾವಳಿ ಜನತೆಯ ಬಹು ವರ್ಷಗಳ ಬೇಡಿಕೆ ಈಡೇರಿರುವುದಿಂದ ಈ ಭಾಗಕ್ಕೆ ಮಾತ್ರವಲ್ಲ ಸಮಗ್ರ ಕರ್ನಾಟಕದ ರೈಲು ಜಾಲ ಬಲವರ್ಧನೆಗೂ ಇದೊಂದು ಮಹತ್ವದ ಹೆಜ್ಜೆಯಾಗಿದೆ. ಶೀಘ್ರವೇ ಮಂಗಳೂರು ರೈಲು ಭಾಗವನ್ನು ಮೈಸೂರು ವಿಭಾಗದ ಜತೆಗೆ ಸೇರಿಸುವ ಪ್ರಕ್ರಿಯೆ ಪೂರ್ಣಗೊಳಿಸುವುದಕ್ಕೆ ರಾಜ್ಯ ಸರ್ಕಾರ ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

<><><>

ರಾಜ್ಯದ ಹಲವೆಡೆ ಇಂದು ಮುಸ್ಲಿಂ ಬಾಂಧವರ ಪವಿತ್ರ ಈದ್ ಮಿಲಾದ್ ಅನ್ನು ಶ್ರದ್ಧಾ ಭಕ್ತಿ, ಸಡಗರಗಳಿಂದ ಆಚರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರವಾದಿ ಮಹಮದ್ ಪೈಗಂಬರ್ ಜನ್ಮ ದಿನಾಚರಣೆಯ ಅಂಗವಾಗಿ ವಿವಿಧ ಮಸೀದಿಗಳಲ್ಲಿ ಮೌಲೀದ್ ಪಾರಾಯಣ ನಡೆಯಿತು. ಮುಸ್ಲಿಂ ಬಾಂಧವರು ಪರಸ್ಪರ ಈದ್ ಶುಭಾಶಯಗಳನ್ನು ಕೋರುವ ಮೂಲಕ ಸಂಭ್ರಮಿಸಿದರು. ಕೋಲಾರ ನಗರದಲ್ಲಿ ಪ್ರವಾದಿ ಮೊಹಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಈದ್ ಮಿಲಾದ್ ಆಚರಿಸಲಾಯಿತು. ನಗರದ ಮಸೀದಿಗಳನ್ನು ವಿಶೇಷವಾಗಿ ಅಲಂಕರಿಸಲಾಗಿದೆ. ಶಾಂತಿ ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ. 'ಈದ್ ಮಿಲಾದ್' ಹಬ್ಬವನ್ನು ದಾವಣಗೆರೆ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಮುಸಲ್ಮಾನ ಬಾಂಧವರು ಭಕ್ತಿ, ಶ್ರದ್ಧೆ ಹಾಗೂ ಸೌಹಾರ್ದತೆಯಿಂದ ಆಚರಿಸಿದರು. ಚಿಕ್ಕಮಗಳೂರು ನಗರದಲ್ಲಿ ಈದ್ ಮಿಲಾದ್ ಅಂಗವಾಗಿ ಮುಸ್ಲಿಂ ಬಾಂದವರು ಮುಂಜಾನೆಯಿಂದಲೇ ಮಸೀದಿಗಳಿಗೆ ತೆರಳಿ ವಿಶೇಷ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ. ಇಂದು ಸಂಜೆ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ಮೆರವಣಿಗೆಯಲ್ಲಿ ಸುಮಾರು ೧೦ ಸಾವಿರ ಜನರು ಪಾಲ್ಗೊಳ್ಳಲಿದ್ದಾರೆ. ಯಾವುದೆ ಆಹಿತಕರ ಘಟನೆ ನಡೆಯದಂತೆ ನಗರದಲ್ಲಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

<><><>

ಕೊಡಗು ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟೆಯ ಒಳಹರಿವಿನ ಪ್ರಮಾಣ ಏರಿಕೆಯಾಗಿದೆ. ಏರಿಕೆ ಕಂಡಿರುವ ಅರ್ಧ ಪ್ರಮಾಣದ ನೀರು ತಮಿಳುನಾಡಿಗೆ ಹರಿದು ಹೋಗುತ್ತಿದೆ. ೧೨೪.೮೦ ಅಡಿ ವಿಸ್ತೀರ್ಣದ ಅಣೆಕಟ್ಟೆಯಲ್ಲಿ ಇಂದು ೯ ಸಾವಿರದ ೪೩೮ ಕ್ಯೂಸೆಕ್ ನೀರಿನ ಒಳಹರಿವಿದ್ದರೆ ೪ ಸಾವಿರದ ೪೭೮ ಹೊರ ಹರಿವಿದೆ. ತಮಿಳುನಾಡಿಗೆ ನಿತ್ಯ ೯ ಸಾವಿರ ಕ್ಯೂಸೆಕ್ ನೀರು ಬಿಡಬೇಕೆಂಬ ಸಿಡಬ್ಲೂಆರ್ಸಿ ಆದೇಶವನ್ನು ಸಿಡಬ್ಲೂಎಂಎ ಎತ್ತಿಹಿಡಿದಿರುವ ಹಿನ್ನಲೆಯಲ್ಲಿ ನೀರು ಬಿಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಪ್ರಸ್ತುತ ಅಣೆಕಟ್ಟೆಯಲ್ಲಿ ೧೦೮.೬೩ ಟಿಎಂಸಿ ನೀರಿದ್ದು, ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಗಗನಚುಕ್ಕಿ ಜಲಪಾತ ಮತ್ತು ಮುತ್ತತ್ತಿಯಲ್ಲಿ ನೀರಿನ ಹೊರ ಹರಿವು ಹೆಚ್ಚಾಗಿದೆ.

<><><><>

ತಮಿಳುನಾಡಿಗೆ ಕಾವೇರಿ ನೀರು ಬಿಡುವ ಆದೇಶ ಖಂಡಿಸಿ ಕನ್ನಡಪರ ಸಂಘಟನೆ ಸದಸ್ಯರು ಚಾಮರಾಜನಗರದ ಭುವನೇಶ್ವರಿ ವೃತ್ತದಲ್ಲಿ ಎಳ್ಳುನೀರು ಬಿಟ್ಟು ಪ್ರತಿಭಟನೆ ನಡೆಸಿದರು. ಕಾವೇರಿ ನೀರು ಬಿಡುವಂತೆ ಸಿಡಬ್ಲ್ಯೂಆರ್‌ಸಿ ನೀಡಿರುವ ತೀರ್ಪು ಅವೈಜ್ಞಾನಿಕವಾಗಿದೆ ಎಂದು ಅಸಮಧಾನ ವ್ಯಕ್ತಪಡಿಸಿದರು. ಪ್ರತಿ ದಿನ ೯ ಸಾವಿರ ಕ್ಯೂಸೆಕ್ ಕಾವೇರಿ ನೀರು ಬಿಡುವಂತೆ ನೀಡಿರುವ ತೀರ್ಪು ಮರು ಪರಿಶೀಲನೆ ಆಗಬೇಕು, ನ್ಯಾಯಾಧೀಕರಣ ಅಧಿಕಾರಿಗಳು ಮೊದಲು ಕೆಆರ್‌ಎಸ್ ಜಲಾಶಯ ಪರಿಶೀಲಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಸ್ಪತ್ರೆಯಲ್ಲಿ ವಿಚಾರಣಾಧೀನ ಕೈದಿಯೊಬ್ಬರಿಗೆ ರಾಜಾತಿಥ್ಯ ನೀಡಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಕಾರಾಗೃಹ ಮತ್ತು ಸುಧಾರಣಾ ಸೇವೆಯ ಡಿಜಿಪಿ ಅಲೋಕ್ ಕುಮಾರ್ ಮಿಮ್ಸ್ ಆಸ್ಪತ್ರೆ ಹಾಗೂ ಜಿಲ್ಲಾ ಕಾರಾಗೃಹಕ್ಕೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಜೈಲು ಪಾಲಾಗಿದ್ದ ಶ್ರೀರಂಗಪಟ್ಟಣದ ಎಡಿಎಲ್‌ಆರ್ ಮಹಮದ್ ಹುಸೇನ್ ಎಂಬ ವಿಚಾರಣಾಧೀನ ಕೈದಿಯನ್ನು ಆಸ್ಪತ್ರೆಗೆ ದಾಖಲಿಸಿ, ವಿಶೇಷ ಆತಿಥ್ಯ ನೀಡಲಾಗುತ್ತಿದೆ ಎಂಬ ವಿಚಾರ ಇತ್ತೀಚೆಗೆ ಜಿಲ್ಲಾ ಸತ್ರ ನ್ಯಾಯಾಧೀಶರು ಆಸ್ಪತ್ರೆಗೆ ಭೇಟಿ ನೀಡಿದ್ದಾಗ ಬೆಳಕಿಗೆ ಬಂದಿತ್ತು. ಈ ಕುರಿತು ಮಾಧ್ಯಮಗಳಲ್ಲಿ ಸರಣಿ ಸುದ್ದಿಗಳು ಪ್ರಸಾರವಾಗುತ್ತಿದ್ದಂತೆಯೇ ಎಚ್ಚೆತ್ತುಕೊಂಡ ಡಿಜಿಪಿ ಅಲೋಕ್ ಕುಮಾರ್ ಖುದ್ದು ಆಸ್ಪತ್ರೆಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿದರು. ಪ್ರಕರಣದಲ್ಲಿ ನಡೆದಿರುವ ಕರ್ತವ್ಯ ಲೋಪ ಹಾಗೂ ನಿಯಮ ಉಲ್ಲಂಘನೆಗಳ ಕುರಿತು ಸಮಗ್ರ ತನಿಖೆ ನಡೆಸುವಂತೆ ದಕ್ಷಿಣ ವಲಯದ ಡಿಐಜಿ ದಿವ್ಯಶ್ರೀ ನೇತೃತ್ವದ ತನಿಖಾ ತಂಡಕ್ಕೆ ಸೂಚಿಸಲಾಗಿದೆ.

<><><><>

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವನ್ಯಜೀವಿ ವಲಯ ವ್ಯಾಪ್ತಿಯ ಚೆಂಡುಮಲ್ಲಿಗೆ ಜಮೀನಿನಲ್ಲಿ ಬೀಡುಬಿಟ್ಟಿದ್ದ ಹುಲಿಯನ್ನು ಅರಣ್ಯ ಇಲಾಖೆ ಸೆರೆ ಹಿಡಿದಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>